## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2019–20ನೇ ಸಾಲಿಗೆ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಅಭಿವೃದ್ಧಿ ಕಾಮಗಾರಿಗಳಿಗಾಗಿ ಲೆಕ್ಕ ಶೀರ್ಷಿಕೆ 4059–80–051–0–47–386 ರಡಿ ಒದಗಿಸಿರುವ ಅನುದಾನದಲ್ಲಿ ಹಣ ಬಿಡುಗಡೆ ಮಾಡುವ ಬಗ್ಗೆ

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಲಾ 61 ಕೆಎಲ್ಎಮ್ 2019, ದಿನಾಂಕ: 15.05.2019 ಮತ್ತು 17.12.2019
2. ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಕುಲಸಚಿವರು, ಇವರ ಪತ್ರ ಸಂಖ್ಯೆ: ಕರಾಕಾವಿ/ಆಡಳಿತ/2019–20/2220, ದಿನಾಂಕ: 11.02.2020.

*****

**ಪ್ರಸ್ತಾವನೆ:**

2019–20 ನೇ ಸಾಲಿನ ಆಯವ್ಯಯದಲ್ಲಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಅಭಿವೃದ್ಧಿ ಕಾಮಗಾರಿಗಳಿಗಾಗಿ ಲೆಕ್ಕ ಶೀರ್ಷಿಕೆ 4059–80–051–0–47–386 ರಡಿ ರೂ. 200.00 ಲಕ್ಷ ಅನುದಾನವನ್ನು ಒದಗಿಸಲಾಗಿದೆ.

ಮೇಲೆ ಓದಲಾದ (1)ರ ಆದೇಶಗಳಲ್ಲಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯಕ್ಕೆ ಮೊದಲನೆಯ, ಎರಡನೆಯ ಹಾಗೂ ಮೂರನೆಯ ಕಂತಿನ ಅನುದಾನ ಒಟ್ಟು ರೂ. 150.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ (2)ರಲ್ಲಿ ಓದಲಾದ ದಿನಾಂಕ: 11.02.2020ರ ಪತ್ರದಲ್ಲಿ ಕುಲಸಚಿವರು, ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ, ಹುಬ್ಬಳ್ಳಿ, ಇವರು 2019–20 ನೇ ಸಾಲಿನ ಆಯವ್ಯಯದಲ್ಲಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಅಭಿವೃದ್ಧಿ ಕಾಮಗಾರಿಗಳಿಗಾಗಿ ಲೆಕ್ಕ ಶೀರ್ಷಿಕೆ 4059–80–051–0–47–386ರಡಿ ಒದಗಿಸಲಾಗಿರುವ ರೂ.200.00 ಲಕ್ಷ ಅನುದಾನದಲ್ಲಿ ನಾಲ್ಕನೆಯ ಹಾಗೂ ಕೊನೆಯ ಕಂತಿನ ಅನುದಾನ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಲಾ 61 ಕೆಎಲ್ಎಮ್ 2019, ಬೆಂಗಳೂರು, ದಿನಾಂಕ:26.02.2020.**

2019–20ನೇ ಸಾಲಿನ ಆಯವ್ಯಯದಲ್ಲಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಅಭಿವೃದ್ಧಿ ಕಾಮಗಾರಿಗಳಿಗಾಗಿ ಲೆಕ್ಕ ಶೀರ್ಷಿಕೆ 4059–80–051–0–47–386ರಡಿಯಲ್ಲಿ ಹಂಚಿಕೆಯಾಗಿರುವ ರೂ. 200.00 ಲಕ್ಷಗಳ ಅನುದಾನದಲ್ಲಿ ನಾಲ್ಕನೆಯ ಹಾಗೂ ಕೊನೆಯ ಕಂತಿನ ಅನುದಾನ ಒಟ್ಟು ರೂ. 50.00 ಲಕ್ಷಗಳನ್ನು (ಐವತ್ತು ಲಕ್ಷ ರೂಪಾಯಿಗಳು ಮಾತ್ರ) ಬಿಡುಗಡೆ ಮಾಡಿದೆ.

..2

ದಿನಾಂಕ:24-02-2020ರ ಹಿಂಬರಹ ಸಂಖ್ಯೆ: ವನಇ 106 ಆಂಆಸ(1) 2020ರಲ್ಲಿ ವಸತಿ, ನಗರಾಭಿವೃದ್ಧಿ ಕಾನೂನು ಮತ್ತು ಇ-ಆಡಳಿತ ಇಲಾಖೆಗಳ ಆಂತರಿಕ ಆರ್ಥಿಕ ಸಲಹೆಗಾರರು ನೀಡಿರುವ ಸಹಮತಿಯನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

NRadha 26/02/2020
(ಎನ್. ರಾಧ)
ಸರ್ಕಾರದ ಅಧೀನ ಕಾರ್ಯದರ್ಶಿ
ಕಾನೂನು ಇಲಾಖೆ (ಮಾನವ ಹಕ್ಕುಗಳು)

**ಇವರಿಗೆ,**

1. ಪ್ರಧಾನ ಮಹಾಲೇಖಪಾಲರು (ಇ ಮತ್ತು ಎಸ್.ಎಸ್.ಎ) ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಮತ್ತು ಆರ್.ಎಸ್.ಎ) ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಬೆಂಗಳೂರು.
4. ಕುಲಸಚಿವರು, ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ, ನವನಗರ ಅಂಚೆ, ಹುಬ್ಬಳ್ಳಿ-580025.
5. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
6. ಉಪನಿರ್ದೇಶಕರು, ಟಿ.ಎನ್.ಎಂ.ಸಿ, 2ನೇ ಮಹಡಿ, ಖನಿಜ ಭವನ, ಬೆಂಗಳೂರು
7. ಸರ್ಕಾರದ ಕಾರ್ಯದರ್ಶಿ (ಖಜಾನೆ-2) ವಾಣಿಜ್ಯ ತೆರಿಗೆ ಇಲಾಖೆಗಳ ಕಟ್ಟಡ, 7ನೇ ಮಹಡಿ, ಕಾಳಿದಾಸ ಮಾರ್ಗ, ಗಾಂಧಿನಗರ, ಬೆಂಗಳೂರು-560009.
8. ಜಿಲ್ಲಾ ಖಜಾನಾಧಿಕಾರಿ, ಹುಬ್ಬಳ್ಳಿ ಉಪ ಖಜಾನೆ, ಹುಬ್ಬಳ್ಳಿ.
9. ಆಂತರಿಕ ಆರ್ಥಿಕ ಸಲಹೆಗಾರರು, ವಸತಿ:ಕಾನೂನು:ನಗರಾಭಿವೃದ್ಧಿ ಮತ್ತು ಇ-ಆಡಳಿತ ಇಲಾಖೆ, ವಿಕಾಸ ಸೌಧ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ-1), ಕಾನೂನು ಇಲಾಖೆ, ವಿಧಾನಸೌಧ
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10), ವಿಧಾನ ಸೌಧ.
12. ಸರ್ಕಾರದ ಅಧೀನ ಕಾರ್ಯದರ್ಶಿ, (ಆಡಳಿತ-2), ಕಾನೂನು ಇಲಾಖೆ, ವಿಧಾನಸೌಧ.
13. ಶಾಖಾ ರಕ್ಷಾ ಕಡತ/ಹೆಚ್ಚಿನ ಪ್ರತಿಗಳು.